## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಎಲ್. ಮೇಘಾನಾಯ್ಕ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಹೂವಿನಹಡಗಲಿ. ಇವರ ವಿರುದ್ಧ ಇಲಾಖಾ ವಿಚಾರಣೆ ಜರುಗಿಸಲು ವಿಚಾರಣಾಧಿಕಾರಿ ಮತ್ತು ಮಂಡನಾಧಿಕಾರಿಗಳನ್ನು ನೇಮಕಾತಿ ಮಾಡುವ ಬಗ್ಗೆ.

**ಓದಲಾಗಿದೆ:** 1.ಜಿಲ್ಲಾಧಿಕಾರಿಗಳು, ಬಳ್ಳಾರಿ ಜಿಲ್ಲೆ, ಬಳ್ಳಾರಿ ರವರ ಪತ್ರ ಸಂಖ್ಯೆ: ಸಿಬ್ಬಂದಿ:1/12/2012-13 ದಿನಾಂಕ: 02-05-2012

2.ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಳ್ಳಾರಿ ಇವರ ಪತ್ರ ಸಂಖ್ಯೆ: ಜಿಪಂಬ:ಆಡಳಿತ:ತಾಪಂ:16:2012-13 ದಿನಾಂಕ:02-05-2012.

3. ಕಾರಣ ಕೇಳುವ ನೋಟೀಸು ಜಾರಿಮಾಡಿದ ದಿ:08-08-2012

4. ಶ್ರೀ ಎಲ್. ಮೇಘನಾಯ್ಕ, ಇವರ ಲಿಖಿತ ಹೇಳಿಕೆ ಸಲ್ಲಿಸಿದ ದಿನಾಂಕ:27-08-2012.

****

**ಪ್ರಸ್ತಾವನೆ:**

ಶ್ರೀ ಹೆಚ್. ನೀಲಪ್ಪ, ತಹಶೀಲ್ದಾರ್, ಹೂವಿನಹಡಗಲಿ ಇವರು ಹೂವಿನ ಹಡಗಲಿ ಶಾಸಕರ ಸೂಚನೆ ಮೇರೆಗೆ ದಿನಾಂಕ: 01-05-2012 ರಂದು ಅವರ ಮನೆಗೆ ತೆರಳಿ, ಮೈಲಾರ ಗ್ರಾಮ ಪಂಚಾಯತಿಯ ಅಧ್ಯಕ್ಷರ ಚುನಾವಣೆ ಕುರಿತು ಹೂವಿನಹಡಗಲಿ ಶಾಸಕರೊಂದಿಗೆ ಚರ್ಚಿಸುವ ಸಮಯದಲ್ಲಿ ತಹಶೀಲ್ದಾರ್ ಮತ್ತು ತಾಲ್ಲೂಕಿನ ದಂಡಾಧಿಕಾರಿಗಳನ್ನು ಶ್ರೀ ಎಲ್. ಮೇಘಾನಾಯ್ಕ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಹೂವಿನಹಡಗಲಿ ಇವರು ಅವಾಚ್ಯ ಶಬ್ದಗಳಿಂದ ನಿಂದಿಸಿರುವುದಲ್ಲದೆ ಅವರ ಮೇಲೆ ಹಲ್ಲೆಗೆ ಪ್ರಯತ್ನಿಸಿದ ಆರೋಪದ ಮೇಲೆ ಇವರ ವಿರುದ್ಧ ಐ ಪಿ ಸಿ ಕಲಂ 353, 342, 323, 504,34 ರ ಪ್ರಕಾರ, ಮೊಕದ್ದಮೆ ದಾಖಲಾಗಿದ್ದು, ಎಫ್.ಐ.ಆರ್. ಸಂಖ್ಯೆ: 35/2012 ನ್ಯಾಯಾಲಯದಲ್ಲಿ ಸಲ್ಲಿಸಿದೆ. ಆದುದರಿಂದ, ಈ ಅಧಿಕಾರಿ ವಿರುದ್ಧ ಶಿಸ್ತು ಕ್ರಮ ಜರುಗಿಸಲು ಜಿಲ್ಲಾಧಿಕಾರಿ, ಬಳ್ಳಾರಿ ಜಿಲ್ಲೆ, ಬಳ್ಳಾರಿ ಮತ್ತು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬಳ್ಳಾರಿ ಇವರು ಮೇಲೆ ಓದಲಾದ ಕ್ರಮಾಂಕ (1) ಮತ್ತು (2) ರಲ್ಲಿ ದಿನಾಂಕ:02-05-2012 ರ ಪತ್ರಗಳಲ್ಲಿ ಸರ್ಕಾರವನ್ನು ಕೋರಿರುತ್ತಾರೆ.

ಶ್ರೀ ಎಲ್. ಮೇಘಾನಾಯ್ಕ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್ ಹೂವಿನಹಡಗಲಿ ಇವರು ಎಸಗಿರುವ ಮೇಲ್ಕಂಡ ಕರ್ತವ್ಯ ಲೋಪಗಳ ಬಗ್ಗೆ ದೋಷಾರೋಪ ಪಟ್ಟಿಯನ್ನು ಮೇಲೆ ಕ್ರಮಾಂಕ (3) ರಲ್ಲಿ ಓದಲಾದ ದಿನಾಂಕ:08-08-2012 ರ ಕಾರಣ ಕೇಳುವ ನೋಟಿಸಿನೊಂದಿಗೆ ಜಾರಿ ಮಾಡಲಾಗಿತ್ತು. ಈ ಅಧಿಕಾರಿಯು ಸಲ್ಲಿಸಿರುವ ಮೇಲೆ ಕ್ರಮಾಂಕ (4) ರಲ್ಲಿ ಓದಲಾದ ದಿನಾಂಕ: 27-08-2012ರ ಸಮಜಾಯಿಷಿಯಲ್ಲಿ ಅವರ ವಿರುದ್ಧ ಮಾಡಿರುವ ಆರೋಪಗಳನ್ನು ನಿರಾಕರಿಸಿ, ಇಲಾಖಾ ವಿಚಾರಣೆಯಿಂದ ದೋಷಮುಕ್ತ ಗೊಳಿಸ ಬೇಕೆಂದು ಕೋರಿರುತ್ತಾರೆ. ಈ ಅಧಿಕಾರಿ ಸಲ್ಲಿಸಿರುವ ವಿವರಣೆಯು ಸಮರ್ಥನೀಯ ವಾಗಿಲ್ಲದ ಕಾರಣ ಇವರ ವಿರುದ್ಧದ ಆರೋಪಗಳ ಸತ್ಯಾಸತ್ಯತೆಯನ್ನು ಕಂಡು ಹಿಡಿಯಲು, ಇಲಾಖಾ ವಿಚಾರಣೆಯನ್ನು ಜರುಗಿಸಲು ಸರ್ಕಾರವು ನಿರ್ಧರಿಸಿರುತ್ತದೆ. ಅದರನ್ವಯ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ:176:ಹಬವ:2012 ಬೆಂಗಳೂರು ದಿನಾಂಕ:05-11-2012**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಶ್ರೀ ಎಲ್. ಮೇಘಾನಾಯ್ಕ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಹೂವಿನಹಡಗಲಿ ಇವರ ವಿರುದ್ಧ ಮಾಡಿರುವ ಆರೋಪಗಳ ಬಗ್ಗೆ ಇಲಾಖಾ ವಿಚಾರಣೆ ಜರುಗಿಸಲು ಶ್ರೀ ಎಸ್.ಜಿ.ಪಲ್ಲೇದ, ನಿವೃತ್ತ

ವಿಚಾರಣಾಧಿಕಾರಿಗಳು, ಈ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11 ರಲ್ಲಿ ನಿಗದಿಪಡಿಸಿರುವ ಕಾರ್ಯವಿಧಾನ ಪ್ರಕಾರ ವಿಚಾರಣೆ ಜರುಗಿಸಿ ವರದಿಯನ್ನು 3 ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ನಿಯಮಾನುಸಾರ ನಿಗಧಿತ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
(ಹೆಚ್.ಬಿ. ರಘುನಾಥ್)
ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ

ಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಜಿಲ್ಲಾಧಿಕಾರಿ, ಬಳ್ಳಾರಿ ಜಿಲ್ಲೆ, ಬಳ್ಳಾರಿ
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಳ್ಳಾರಿ.
4. ಶ್ರೀ ಎಸ್. ಜಿ. ಪಲ್ಲೇದ, ನಿವೃತ್ತ ನ್ಯಾಯಾಧೀಶರು, ಮತ್ತು ವಿಚಾರಣಾಧಿಕಾರಿ, ಅಧ್ಯಕ್ಷರು.ಜಿಲ್ಲಾ ಗ್ರಾಹಕರ ವೇದಿಕೆ, ಗದಗ ಜಿಲ್ಲೆ ಗದಗ.
5. ಸಹಾಯಕ ಕಾರ್ಯದರ್ಶಿ(ಅಭಿವೃದ್ಧಿ), ಜಿಲ್ಲಾ ಪಂಚಾಯತಿ, ಬಳ್ಳಾರಿ (ಮಂಡನಾಧಿಕಾರಿ)
6. ಶ್ರೀ ಎಲ್. ಮೇಘಾನಾಯ್ಕ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್ ಹೂವಿನಹಡಗಲಿ, ಬಳ್ಳಾರಿ ಜಿಲ್ಲೆ.
7. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರ ಆಪ್ತ ಕಾರ್ಯದರ್ಶಿ,
8. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ
9. ಹೆಚ್ಚುವರಿ ಪ್ರತಿ/ ಶಾಖಾ ರಕ್ಷಕ ಕಡತ/